ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಖಾಸಗಿ ಪ್ರಾಥಮಿಕ/ಪ್ರೌಢ ಪದವಿ ಪೂರ್ವಶಾಲಾ-ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

748 (918) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಖಾಸಗಿ ಪ್ರಾಥಮಿಕ ಶಾಲೆ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು ;

(ಆ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿರುವ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರ ಹೆಸರು, ಅವರು ಬೋಧಿಸುತ್ತಿರುವ ವಿಷಯ ಹಾಗೂ ಕಾರ್ಯನಿರ್ವಹಿಸುತ್ತಿರುವ ಶಾಲಾ ಕಾಲೇಜುಗಳ ವಿವರವನ್ನು ಒದಗಿಸುವುದು ;

(ಈ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಅನುದಾನ ರಹಿತವಾಗಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಮತ್ತು ಯಾರು ಯಾರು ; ಅವರು ಬೋಧಿಸುತ್ತಿರುವ ವಿಷಯ, ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಹೆಸರು ಮತ್ತು ವಿಳಾಸವನ್ನು ಒದಗಿಸುವುದು ; (ವಿಜಯಪುರ, ಬಾಗಲಕೋಟೆ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ಮಾಹಿತಿ ನೀಡುವುದು)

(ಉ) ಕೋವಿಡ್-19 ಸಮಸ್ಯೆಯ ಹಿನ್ನೆಲೆಯಲ್ಲಿ, ಶಾಲೆಗಳು ನಡೆಯದೇ ಶಿಕ್ಷಕರ ಜೀವನ ನಿರ್ವಹಣೆ ಕಷ್ಟವಾಗಿದ್ದು ಈ ಎಲ್ಲ ಸಿಬ್ಬಂದಿ ವರ್ಗಕ್ಕೆ ಸರ್ಕಾರದಿಂದ "ವಿಶೇಷ ಪ್ಯಾಕೇಜ್" ಘೋಷಣೆ ಮಾಡಿ ಆರ್ಥಿಕ ನೆರವಿಗೆ ಸರ್ಕಾರ ಮುಂದಾಗಲು ತೀರ್ಮಾನಿಸಿದೆಯೇ? (ವಿವರಗಳನ್ನು ಒದಗಿಸುವುದು)